ಕುಣಿಗಲ್ ಪುರಸಭೆಯನ್ನು ನಗರಸಭೆಯನ್ನಾಗಿ ಉನ್ನತೀಕರಣ

218 (55) ಶ್ರೀ ರಾಮಸ್ವಾಮಿಗೌಡ ಬಿ.ಬಿ (ಕುಣಿಗಲ್) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್ ಪುರಸಭೆಯನ್ನು ನಗರಸಭೆಯನ್ನಾಗಿ ಉನ್ನತೀಕರಿಸಲು ಹಾಲಿ ಇರುವ ಮಾನದಂಡಗಳ ಪ್ರಕಾರ ಅವಕಾಶವಿದೆಯೇ, ಇದ್ದಲ್ಲಿ ಸರ್ಕಾರವು ಈ ಬಗ್ಗೆ ಕ್ರಮ ಕೈಗೊಳ್ಳುವುದೇ;

ಆ) ಕುಣಿಗಲ್ ಪುರಸಭೆಯ ಸರಹದ್ದನ್ನು ವಿಸ್ತರಣೆ ಮಾಡುವ ಬೇಡಿಕೆ ಸರ್ಕಾರದ ಮುಂದಿದೆಯೇ, ಇದ್ದಲ್ಲಿ ಕೈಗೊಂಡಿರುವ ಕ್ರಮಗಳೇನು;

ಇ) ಹಾಗಿಲ್ಲದಿದ್ದಲ್ಲಿ, ಸರಹದ್ದನ್ನು ವಿಸ್ತರಣೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎಸ್. ಬಾಲಚಂದ್ರ ಲಕ್ಷ್ಮಣರಾವ್ ಜಾರಕಿ ಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು) :

ಅ) ಕರ್ನಾಟಕ ಪುರಸಭೆ ಕಾಯ್ದೆ 1964ರ ಕಲಂ 3ರ ಉಪ ಕಲಂ (1)ರ (ಎ) (ಬಿ) (ಸಿ) (ಡಿ) (ಇ) ಮತ್ತು (ಎಫ್) ಮತ್ತು ಕಲಂ 9 ರನ್ವಯ ಯಾವುದೇ ಒಂದು ಪುರಸಭೆಯನ್ನು ನಗರಸಭೆಯನ್ನಾಗಿ ಪರಿವರ್ತಿಸಿ ಉದ್ಘೋಷಿಸಲು ಈ ಕೆಳಕಂಡ ಲಕ್ಷಣಗಳನ್ನು ಹೊಂದಿರಬೇಕಾಗುತ್ತದೆ.

1. ಅಂತಹ ಪ್ರದೇಶದ ಜನಸಂಖ್ಯೆಯು ಐವತ್ತು ಸಾವಿರಕ್ಕಿಂತ ಕಡಿಮೆ ಇಲ್ಲದಿರುವುದನ್ನು ಮತ್ತು ಮೂರು ಲಕ್ಷಕ್ಕಿಂತ ಕಡಿಮೆ ಇರುವುದನ್ನು;
2. ಅಂಥ ಪ್ರದೇಶದಲ್ಲಿ ಜನಸಾಂದ್ರತೆಯ ಒಂದು ಚದುರ ಕಿಲೋ ಮೀಟರ್ ವಿಸ್ತೀರ್ಣಕ್ಕೆ ಒಂದು ಸಾವಿರದ ಐದುನೂರಕ್ಕಿಂತ ಕಡಿಮೆಯಿಲ್ಲದಿರುವುದನ್ನು;
3. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗ ಪ್ರಮಾಣದ ಶೇಕಡಾ ಐವತ್ತಕ್ಕಿಂತ ಕಡಿಮೆ ಇಲ್ಲದಿರುವುದನ್ನು;
4. ಅಂಥ ಪ್ರದೇಶಗಳಿಂದ ಹಿಂದಿನ ಜನಗಣತಿಯ ವರ್ಷದಲ್ಲಿ ತೆರಿಗೆ ಮತ್ತು ತೆರಿಗೆಯೇತರ ಸಂಪನ್ಮೂಲಗಳಿಂದ

ಉತ್ಪತ್ತಿಯಾದ ಆದಾಯವು 22,50,000 ರೂಪಾಯಿಗಳಿಗಿಂತ ಕಡಿಮೆ ಇಲ್ಲದಿರುವುದನ್ನು.

ಪರಿಶೀಲಿಸಲಾಗಿ ಕುಣಿಗಲ್ ಪುರಸಭೆಯು ಈ ಮೇಲ್ಕಂಡ ಲಕ್ಷಣಗಳನ್ನು ಪೂರೈಸಿಲ್ಲದೇ ಇರುವುದರಿಂದ ನಗರಸಭೆಯನ್ನಾಗಿ ಪರಿವರ್ತಿಸಲು ಕಾನೂನಿನಲ್ಲಿ ಅವಕಾಶವಿರುವುದಿಲ್ಲ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಕೊಳಚೆ ಪ್ರದೇಶ ಅಭಿವೃದ್ಧಿ ಯೋಜನೆ

222 (488) ಶ್ರೀ ರೇವಣ್ಣ ಹೆಚ್.ಡಿ. (ಹೊಳೆನರಸೀಪುರ) : ಮಾನ್ಯ ವಸತಿ, ವಾರ್ತಾ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಕೊಳಚೆ ಪ್ರದೇಶಗಳಲ್ಲಿ ಕೇಂದ್ರ ಸರ್ಕಾರದ ವತಿಯಿಂದ 2007–08, 2008–09 ಮತ್ತು 2009–10ನೇ ಸಾಲಿನಲ್ಲಿ ಐಹೆಚ್ಎಸ್‌ಡಿಪಿ (ಇಂಟಿಗ್ರೇಟೆಡ್ ಹೌಸಿಂಗ್ ಸ್ಲಂ ಡೆವಲಪ್‌ಮೆಂಟ್ ಪ್ರೋಗ್ರಾಮ್) ಯೋಜನೆಯಡಿಯಲ್ಲಿ ಮನೆಗಳನ್ನು ತೆಗೆದುಕೊಂಡಿರುವ ಪಟ್ಟಣವಾರು ವಿವರಗಳನ್ನು ನೀಡುವುದು ಹಾಗೂ ಈ ಪಟ್ಟಣಗಳಲ್ಲಿ ಮನೆಗಳನ್ನು ನಿರ್ಮಿಸಲು ಯಾವ ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ (ಅವರ ಹೆಸರು ಹಾಗೂ ವಿಳಾಸ ಸಹಿತ ಪೂರ್ಣ ಮಾಹಿತಿ ನೀಡುವುದು);

ಆ) ಈ ಗುತ್ತಿಗೆದಾರರು ಕಾಮಗಾರಿಯನ್ನು ಪೂರ್ಣಗೊಳಿಸಲು ಕಾಲಮಿತಿಯನ್ನೇನಾದರೂ ನಿಗದಿಪಡಿಸಲಾಗಿದೆಯೇ, ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆಯೇ;

ಇ) ಈ ಗುತ್ತಿಗೆದಾರರಿಗೆ ಕಾಮಗಾರಿಗಳ ಬಿಲ್ಲುಗಳನ್ನು ಸಕಾಲದಲ್ಲಿ ಪಾವತಿ ಮಾಡಲಾಗಿದೆಯೇ ಹಾಗೂ ಗುತ್ತಿಗೆದಾರರಿಗೆ ವಿಳಂಬವಾಗಿ ಬಿಲ್ಲು ಪಾವತಿ ಮಾಡಿದ್ದಲ್ಲಿ, ಅದರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಈ) ಕೊಳಚೆ ಪ್ರದೇಶಗಳಲ್ಲಿ ಕೇಂದ್ರ ಸರ್ಕಾರದ ವತಿಯಿಂದ 2007–08, 2008–09 ಮತ್ತು 2009–10ನೇ ಸಾಲಿನಲ್ಲಿ ಐ.ಹೆಚ್.ಎಸ್.